# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/62/19-20

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 27.6.24

**ಸುತ್ತೋಲೆ**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದ ಎಲ್ಲಾ ಕಡತ / ಪತ್ರಗಳನ್ನು ಸಮುಚಿತ ಮಾರ್ಗದಲ್ಲಿ (Through Proper Channel) ಸಲ್ಲಿಸುವ ಬಗ್ಗೆ.

ಉಲ್ಲೇಖ: 1) ಸಂಖ್ಯೆ: ಬಿ12(ಸಿ1)ಪಿಆರ್/79/20-21, ದಿನಾಂಕ: 09-03-2021
2) ಸಂಖ್ಯೆ: ಬಿ12(1ಜಿ)ಪಿಆರ್/54/22-23, ದಿನಾಂಕ: 17-05-2022

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಡತವು ಕಛೇರಿ ವ್ಯವಹಾರಗಳ ಒಂದು ಪ್ರಮುಖ ದಾಖಲೆಯಾಗಿದ್ದು, ಪತ್ರಗಳು, ಅರ್ಜಿಗಳು, ಮನವಿಗಳು ಇತರೇ ವಿಷಯಕ್ಕೆ ಸಂಬಂಧಿಸಿದಂತೆ ಕಡತಗಳ ನಿರ್ವಹಣೆಯ ಸಂಬಂಧ ಸ್ಪಷ್ಟವಾದ ಮಾರ್ಗಸೂಚಿಗಳಿದ್ದು, ಈಗಾಗಲೇ ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಸೂಚನೆ ಮೇರೆಗೆ ಉಲ್ಲೇಖ-(1) ಮತ್ತು (2)ರಂತೆ ಸುತ್ತೋಲೆಗಳನ್ನು ಹೊರಡಿಸಿ, ಪಾಲಿಕೆಯ ಕೇಂದ್ರ ಕಛೇರಿ, ವಲಯ ಕಛೇರಿ, ವಿಭಾಗ ಕಛೇರಿ, ಉಪ ವಿಭಾಗ ಕಛೇರಿ ಮತ್ತು ಇನ್ನಿತರೇ ಎಲ್ಲಾ ಕಛೇರಿಗಳಲ್ಲಿ ಕಡ್ಡಾಯವಾಗಿ ಇ-ಆಫೀಸ್‌ನಲ್ಲಿಯೇ ಕಡತಗಳನ್ನು ನಿರ್ವಹಿಸಲು ಸೂಚಿಸಲಾಗಿದ್ದು, ಅದರಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಕಛೇರಿಯ ಆವರಣದಲ್ಲಿರುವ ಎಲ್ಲಾ ಕಛೇರಿಗಳಲ್ಲಿಯೂ ಇ-ಆಫೀಸ್ ತಂತ್ರಾಂಶವನ್ನು ಅಳವಡಿಸಿಕೊಂಡು ಇ-ತಂತ್ರಾಂಶದ ಮೂಲಕ ಕಡತಗಳನ್ನು ನಿರ್ವಹಣೆ ಮಾಡಲಾಗುತ್ತಿರುತ್ತದೆ. ಇದೇ ರೀತಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಹಾಗೂ ಎಲ್ಲಾ ವಲಯ ಕಛೇರಿಗಳಲ್ಲಿಯೂ ಸಹ ಇ-ತಂತ್ರಾಂಶದ ಮೂಲಕ ಕಡತಗಳನ್ನು ಕಡ್ಡಾಯವಾಗಿ ನಿರ್ವಹಣೆ ಮಾಡುವುದು ಅತ್ಯಾವಶ್ಯಕವಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲವು ಕಛೇರಿಗಳಲ್ಲಿ ಇ-ತಂತ್ರಾಂಶದ ಮೂಲಕ ಕಡತಗಳ ನಿರ್ವಹಣೆ ಮಾಡದೆ ಇರುವುದು ಕಂಡುಬಂದಿರುತ್ತದೆ.

ಆದುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಕಛೇರಿಗಳಲ್ಲಿಯೂ ಇ-ಆಫೀಸ್ ತಂತ್ರಾಶವನ್ನು ಕಡ್ಡಾಯವಾಗಿ ಬಳಸಬೇಕಾಗಿರುತ್ತದೆ ಹಾಗೂ ಇ-ತಂತ್ರಾಂಶ ಅಳವಡಿಸಲು ಅವಶ್ಯಕತೆ ಇರುವ ಎಲ್ಲಾ ಮಾಹಿತಿಗಳ ವಿವರಗಳನ್ನು ಪಾಲಿಕೆಯ ಮಾಹಿತಿ ತಂತ್ರಜ್ಞಾನ ಶಾಖೆಯಿಂದ ಪಡೆದುಕೊಂಡು, ಅದರಂತೆ ಎಲ್ಲಾ ಮಾಹಿತಿಗಳನ್ನು ಮಾಹಿತಿ ತಂತ್ರಜ್ಞಾನ ಕಛೇರಿಗೆ ಒದಗಿಸಿ, ಜರೂರಾಗಿ ಇ-ತಂತ್ರಾಂಶವನ್ನು ಕೇಂದ್ರ ಕಛೇರಿ ಹಾಗೂ ವಲಯದ ಅಧೀನ ಕಛೇರಿಗಳಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವುದು ಹಾಗೂ ಇ-ತಂತ್ರಾಂಶದ ಮೂಲಕ ಕಡತಗಳನ್ನು ಮಂಡಿಸುವ ಸಂದರ್ಭಗಳಲ್ಲಿ ಸಮುಚಿತ ಮಾರ್ಗದಲ್ಲಿ ಮಾತ್ರ (Through Proper Channel) ಕಡತ / ಪತ್ರಗಳನ್ನು ಮೇಲಧಿಕಾರಿಗಳಿಗೆ ಮಂಡಿಸಲು ಸ್ಪಷ್ಟ ನಿರ್ದೇಶನವನ್ನು ಈ ಮೂಲಕ ನೀಡಲಾಗಿದೆ. ಕಡತ / ಪತ್ರಗಳನ್ನು ಬೈಪಾಸ್ ರೀತಿಯಲ್ಲಿ ಮಂಡಿಸುವುದು ಕಂಡುಬಂದಲ್ಲಿ ಸಂಬಂಧಪಟ್ಟ ವಿಷಯ ನಿರ್ವಾಹಕರು, ವ್ಯವಸ್ಥಾಪಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.

27.6.24
ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) / (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಮಾಹಿತಿ ತಂತ್ರಜ್ಞಾನ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಲಯ ಅಪರ / ಜಂಟಿ ಆಯುಕ್ತರು ರವರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಎಲ್ಲಾ ವಲಯ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
: ಕಛೇರಿ ಪ್ರತಿ.